ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 114 ತಎಇ 2012

ಕರ್ನಾಟಕ ಸರ್ಕಾರ ಸಚಿವಾಲಯ
ಕೊಠಡಿ ಸಂ:613, 6ನೇ ಮಹಡಿ,
1 ನೇ ಗೇಟ್,ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03 " 2012

## ಸುತ್ತೋಲೆ

ದಿನಾಂಕ: 22.8.2012 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ 2ನೇ ಆಡಳಿತ ಸುಧಾರಣೆ ಆಯೋಗದ ಶಿಫಾರಸ್ಸುಗಳ ಅನುಷ್ಠಾನ ಕುರಿತ ಸಭೆಯ ನಡವಳಿಯ ಪ್ರಕಾರ ಸಚಿವಾಲಯದ ವಿವಿಧ ಇಲಾಖೆಗಳಲ್ಲಿ ಬಾಕಿ ಕಡತಗಳ ವಿಲೇವಾರಿ ಕುರಿತಂತೆ ಚರ್ಚಿಸಲಾಯಿತು. ಸಚಿವಾಲಯದ ಇಲಾಖೆಗಳಲ್ಲಿ ಭೌತಿಕವಾಗಿ ಗಣಕಯಂತ್ರದಲ್ಲಿ ಬಾಕಿ ತೋರಿಸುತ್ತಿರುವ ಕಡತಗಳನ್ನು ವಿಲೇಗೊಳಿಸುವ ಹಂತವಾಗಿ, ಎಲ್ಲ ಇಲಾಖೆಗಳು ತಮ್ಮ ಇಲಾಖೆಗಳಲ್ಲಿ ಮುಕ್ತಾಯಗೊಂಡು ಭೌತಿಕವಾಗಿ ಲಭ್ಯವಿಲ್ಲದಿರುವ ಕಡತಗಳ ಪಟ್ಟಿ ತಯಾರಿಸಿ, ಅವುಗಳನ್ನು ಮುಕ್ತಾಯಗೊಳಿಸಲು, ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಅನುಮೋದನೆ ಪಡೆದುಕೊಂಡು ಗಣಕಯಂತ್ರದಲ್ಲಿ ಕೂಡಲೇ ಮುಕ್ತಾಯಗೊಳಿಸಲು ಕ್ರಮ ವಹಿಸುವಂತೆ ಸೂಚಿಸಲಾಗಿದೆ. ಈ ರೀತಿ ಕ್ರಮ ಕೈಗೊಳ್ಳುವುದರಿಂದ ಕಡತಗಳ ವಿಲೇವಾರಿಯಲ್ಲಿ ಪ್ರಗತಿ ಕಾಣಬಹುದೆಂದು, ಸಭೆಯಲ್ಲಿ ಸೂಚಿಸಿರುವ ಹಿನ್ನೆಲೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ. ಇದರಲ್ಲಿ ತಾಂತ್ರಿಕ ತೊಂದರೆ ಕಂಡುಬಂದಲ್ಲಿ ರಾಷ್ಟ್ರೀಯ ಮಾಹಿತಿ ಕೇಂದ್ರದ (ಎನ್.ಐ.ಸಿ.) ನೆರವನ್ನು ಪಡೆಯುವಂತೆ ತಿಳಿಸಲಾಗಿದೆ.

(ಡಾ:ಶಾಲಿನಿ ರಜನೀಶ್)
ಸರ್ಕಾರದ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)

ಗೆ:

1) ಸರ್ಕಾರದ ಎಲ್ಲ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು.
5) ಸಚಿವಾಲಯದ ಎಲ್ಲ ಇಲಾಖೆಗಳು/ಶಾಖೆಗಳು.
6) ಕಡತದ ಪ್ರತಿ/ಹೆಚ್ಚುವರಿ ಪ್ರತಿಗಳು